ಬೀದರ್ ಜಿಲ್ಲೆಯ ವಿದ್ಯಾರ್ಥಿ ನಿಲಯಗಳ ಕಟ್ಟಡದ ಬಗ್ಗೆ

ಶ್ರೀ ಅರವಿಂದಕುಮಾರ್‌ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು):-

3 (105) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯಲ್ಲಿ ಇಲಾಖೆಯ ನಿವೇಶನವಿದ್ದರೂ ಬಾಡಿಗೆ ಕಟ್ಟಡದಲ್ಲಿ ವಿದ್ಯಾರ್ಥಿ ನಿಲಯಗಳನ್ನು ನಡೆಸುತ್ತಿರುವುದಕ್ಕೆ ಕಾರಣವೇನು ; ಖಾಲಿ ಇದ್ದ ನಿವೇಶನಗಳಲ್ಲಿ ವಿದ್ಯಾರ್ಥಿ ನಿಲಯಗಳ ಕಟ್ಟಡ ಕಟ್ಟುವುದು ಯಾವಾಗ ; ವಿಳಂಬವಾಗುವುದಕ್ಕೆ ಕಾರಣಗಳೇನು ;

(ಆ) ಬೀದರ್ ಜಿಲ್ಲೆಯ ಬೀದರ್ ನಗರದ ಜನವಾಡ ರಸ್ತೆಯಲ್ಲಿರುವ ವಿದ್ಯಾರ್ಥಿ ನಿಲಯದ ಕಟ್ಟಡವನ್ನು ಹೊಸ ಕಟ್ಟಡ ನಿರ್ಮಾಣ ಮಾಡಲು ಕೆಡವಿದ್ದು, ಇಲ್ಲಿಯವರೆಗೂ ಹೊಸ ಕಟ್ಟಡ ನಿರ್ಮಾಣವಾಗದಿರಲು ಕಾರಣವೇನು ?